ಆಯೊಯ ಹಕ್ಕುದಾರರೇ ಆಗಲಿ. ಅಥವಾ ಅವರು ಮೃತಪಟ್ಟಿದ್ದ ಪಕ್ಷದಲ್ಲಿ ಅವರ ನ್ಯಾಯವಾದ ಹಕ್ಕುದಾರರೇ ಆಗಲಿ ತಮ್ಮ ಹಕ್ಕುದಾರಿಕೆಯನ್ನು ಸ್ಥಾಪಿಸಿ ಸದರಿ ಮೊಬಲಗು ತಮಗೆ ಸಲ್ಲಬೇಕೆಂದು ತಿಳಿಸದಪಕ್ಷದಲ್ಲಿ ಅದು ಸರ್ಕಾರಕ್ಕೆ ಸೇರಿಸಲ್ಪಡುತ್ತೆ :—

ನಂ.	ಹೆಸರು.	ಸಲ್ಲಬೇಕಾದ ಮೊಬಲಗ್ಗೆ ಅವರಿಂದ ಮಾಡಲ್ಪಟ್ಟ ಕೆಲಸಗಳು.	ಸಲ್ಲಬೇಕಾದ ಮೊಬಲಗು.
			ರೂ. ಆ. ಪೈ.
1	ವೆಂಕಟನಾಯಕ	1904-05ನೆ ಬೂಣಾವಾರ್, ಬೇಲೂರು, ಮೂಡಿಗೆರೆ ರಸ್ತೆ ರಿಪೇರಿ.	8 11 7
2	ಮುನಿಸಾಮಿ ...	ಡಿಟ್ಟೋ ...	1 4 9
3	ಅಲಸಿಂಗಾಚಾರಿ ಮತ್ತು ನರಸಿಂಹಾಚಾರಿ.	ಬುಡನೂರು ಕೆರೆ ರಿಪೇರಿ ಮಾಡಿದ್ದು ...	3 0 0
4	ಡಿ. ವೆಂಕಟನಾಯ್ಡು ...	904—05ನೆ ಹಾಸನ, ಚಿಕ್ಕಮಗಳೂರು ರಸ್ತೆ ರಿಪೇರಿ	24 11 0

ಎಫ್. ಎ. ಸ್ಟೀಲ್,
ಅಫೀಷಿಯೇಟಿಂಗ್ ಎಗ್ಜಿಕ್ಯೂಟಿವ್ ಇಂಜನಿಯರ್.

ಬೆಂಗಳೂರು ಸಿಟಿ ಮ್ಯುನಿಸಿಪಲ್ ಆಫೀಸಿನಿಂದ.

ಇನ್ಸಿಪಾರ್.

ತಾರೀಖು 5ನೆ ಏಪ್ರಿಲ್ 1907.

ಇದರಿಂದ ಸರ್ವಸ್ವ ಜನಗಳಿಗೂ ತಿಳಿಯಪಡಿಸುವದೇನಂದರೆ :—ಗೌರ್ನಮೆಂಟಿನಿಂದ ಸಾದರವಾದ 29—6—1901ನೆ ಮುಕ್ರ್ಯೂ 17691—L. B. (P) 633ನೆ ನವೆಂಬರ್ ಪ್ರೊಸೀಡಿಂಗ್ಸ್ ಅನುಸಾರ ಇದರ ಮಾಜ್ಜನ್ನಲ್ಲಿ ತೋರಿಸಿರುವ ಬೆಂಗಳೂರು ಸಿಟಿ ಬಸವನಗುಡಿ ಎಕ್ಸ್‌ಟೆಂಷನ್‌ಗೆ ಸೇರಿದ ಕಟ್ಟಡ ಕಟ್ಟುವತಕ್ಕ ನೈಟುಗಳನ್ನು 1907ನೆ ಇಸವಿ ಏಪ್ರಿಲ್ ತಾ॥ 20ರಲ್ಲು ಹರಾಜು ಮೂಲಕ ವಿ

ಬಸವನಗುಡಿ ಎಕ್ಸ್‌ಟೆಂಷನ್.	ಅಳತೆ.	ಹರಾಜು ತಾರೀಖು.
1ನೆ ಬ್ಲಾಕ್	232—233—234—235—236 237—238—239—240 } 110 × 30 241 & 242	20-4-07
3ನೆ (ಬಿ) ಬ್ಲಾಕ್	130—131—132—133—134 135—136—137—138 } 120 × 30 139—140—141—142 144—145—146—147	
	148 & 149	
	143 } 120 × 34	

ಕ್ರಯಿಸತಕ್ಕದ್ದೆಂತ ನಿಶ್ಚಯಿಸಿ ಇರುತ್ತಾಗಿ ಹರಾಜಿನಲ್ಲಿ ಛಡಿ ಸವಾಲ್ ಮೂಲಕ ಪಡದುಕೊಳ್ಳಲು ಇಷ್ಟವುಳ್ಳವರು ಅದೇ ತಾರೀಖು ಪೂರ್ವಾಹ್ನ 7½ ಘಂಟೆ ಲಾಗಾಯಿತ್ತು ಆಯಾಪ್ಲು ನೈಟುಗಳ ಬಳಿ ಹಾಜರಿದ್ದು ಛಡಿ ಸವಾಲ್ ಮೂಲಕ ಈ ಕೆಳಗೆ ಕಂಡ ಷರತ್ತುಗಳಿಗೆ ವಳಪಟ್ಟು ಛಡಿಸವಾಲ್‌ನಲ್ಲಿ ಪಡದುಕೊಳ್ಳಬಹುದಾಗಿರುತ್ತೆ. ಆ ದಿವಸ ಹರಾಜು ಪೂರ್ತಿಪಡೆ ನಿಲ್ಲುವ ನೈಟುಗಳನ್ನು ಮೂರು ದಿವಸಗಳಲ್ಲಿ ಅದೇ ಟೈಮಿನಲ್ಲಿ ಹರಾಜು ಮಾಡಿಸಲ್ಪಡುತ್ತೆ.

1. ಹರಾಜು ಖೈದಾದ ಕೂಡ್ಲೆ ಛಡಿ ಸವಾಲ್ ಮೊಬಲಗಿನಲ್ಲಿ ಕೀಕಡೆ 25 ರೂಪಾಯಿನಂತೆ ಆಗುವ ಮೊಬಲಗನ್ನು ಠೇವಣಿ ಇಡಬೇಕು. ಹಾಗಿಡದೆ ತಪ್ಪಿದರೆ ಕೂಡ್ಲೆ ದುಸರಾ ಹರಾಜು ಮಾಡಿಸಿ ಬರುವ ಲುಕ್ಸಾನಿಗೆ ಮೊದಲು ಛಡಿಸವಾಲ್‌ದಾರನ್ನ ಗುರುಮಾಡಲ್ಪಡುತ್ತೆ.

2. ಹರಾಜು ತಾರೀಖು ಲಾಗಾಯಿತ್ತು 15 ದಿವಸದೊಳಗಾಗಿ ಬಾಕಿ ನಿಲ್ಲುವ ಮೊಬಲಗೆಂದರೆ ಛಡಿಸವಾಲ್ ಮೊಬಲಗ್ಗೆ ನ್ಯಾರ್ತಿಯಾಗಿ ಕೊಡತಕ್ಕ ಕೀಕಡೆ 75 ರೂಪಾಯಿನಂತೆ ಆಗುವ ಮೊಬಲಗನ್ನ ಛಡಿಸವಾಲ್‌ದಾರ ಹಾಜರ್‌ಪಡಿಸಿ ರಸೀತ ಪಡಿಯಬೇಕು. ಇದ್ದಕ್ಕೆ ತಪ್ಪಿದರೆ ಠೇವಣಿ ಮೊಬಲಗನ್ನ ಸರ್ಕಾರಕ್ಕೆ ದಂಡವಾಗಿ ತೆಗದುಕೊಳ್ಳುವದಲ್ಲದೆ ಪುನಹ ಅಂಥಾ ನೈಟನ್ನ ದುಸರಾ ಹರಾಜಿಗೆ ತಂದುಮಾಡಿ ಬರುವ ನಷ್ಟಕ್ಕೆ ಮೊದಲು ಛಡಿಸವಾಲ್‌ದಾರನ್ನ ಗುರುಮಾಡಲ್ಪಡುತ್ತೆ.

3. ಹರಾಜು ಮಂಜೂರಾದ ಕೂಡ್ಲೆ ನೈಟನ್ನ ಛಡಿಸವಾಲ್‌ದಾರನು ಸ್ವಾಧೀನಪಡಿಸಿಕೊಳ್ಳಬೇಕು.

4. ಕೊಟ್ಟ ತಾರೀಖಿನಾರಭ್ಯ 30 ದಿವಸದೊಳಗಾಗಿ ಕಟ್ಟಡದ ಕೆಲಸವನ್ನ ಸುರೂ ಮಾಡತಕ್ಕದ್ದು; ಮತ್ತು 6 ತಿಂಗಳೊಳಗಾಗಿ ಕಟ್ಟಡವನ್ನು ಪೂರೈಸತಕ್ಕದ್ದು.

5. 50 ಅಡಿ ಲಂಬಟಿಗೆ ಕಡಿವು ಇಲ್ಲದಷ್ಟು ಜಾಗವನ್ನು ಮೇಲೆ ಜಾವಣಿ ಇಲ್ಲದೆ ಅಂಗಳಕ್ಕಾಗಿ ಅಥವಾ ಗಾಳಿ ಎರತಕ್ಕದ್ದಕ್ಕಾಗಿ ಯಾವಾಗೆಲೂ ಬಿಟ್ಟಿರಬೇಕು. ಸದರೀ ಸ್ಥಳದಲ್ಲಿ ಹಂಗಾಮಿ, ಯಾ ಖಾಯಂ ಕಟ್ಟಡ ಯಾವದನ್ನೂ ಕಟ್ಟಕೂಡದು.

6. ಕಟ್ಟಡದ ಪ್ಲಾನ್ ವಗೈರೆ ಸ್ಯಾನಿಟರಿ ಇಂಜನಿಯರವರಿಂದ ಮಂಜೂರಾಗುವ ವರಿಗೂ ಯಾವಕಟ್ಟಡವನ್ನೂ ಪ್ರಾರಂಭಿಸಕೂಡದು. ಮಾಳಿಗೆ ಮನೆಯನ್ನು ಕಟ್ಟಲೇಕೂಡದು. ಕಟ್ಟಡಗಳೆಲ್ಲಾ ಹೆಂಚಿನದಾಗಿಯಾಗಲಿ ಅಥವಾ ತಾರಸೀದಾಗಲಿ ಇರತಕ್ಕದ್ದು.

7. ನೆಲ ಮತ್ತು ಹಿತ್ತಲು ಮಟ್ಟವು ರೋಜೀನಾ ವಾಕೀಜಾ ಬಗ್ಗೆ ಕಕ್ಕಸ ಕಟ್ಟತಕ್ಕ ಸ್ಥಳವು ಮತ್ತು ಮನೆ ಬಚ್ಚಲು ನೀರು ಹೋಗುವದಕ್ಕೆ ಕಟ್ಟತಕ್ಕ ಮೊಹರಿ ತರಹೆ ಮತ್ತು ಜಾಗ ಸಹ ಸ್ಯಾನಿಟರಿ ಇಂಜನಿಯರವರು ಅಪ್ಪಣೆ ಮಾಡಲು ರೀತಿಯಲ್ಲಿರತಕ್ಕದ್ದು.

8. ಬಂದು ಮತ್ತ, ಪಣ ಅಥವಾ ಜಾತಿಯವರಿಗೆ ಏರ್ಪಡಿಸಿರುವ ಬೀದಿಯಲ್ಲಿನ ಮನೆಯಲ್ಲಿ ಸದರೀ ಬೀದಿಯ ಸಮಸ್ತ ಜನಗಳ ಬರಹ ಮೂಲಕವಾದ ಒಪ್ಪತದ ಮೇಲೆ ಡೆಪ್ಯುಟಿ ಕಮಿಷರ್ಸರವರು ಮಂಜೂರ್ಮಾಡಿದ ಹೊರ್ತು ಇತರ ಮತ್ತ, ಪಣ ಯಾ ಜಾತಿಯವರು ವಾಸ ಮಾಡಕೂಡದು.

9. ಕಟ್ಟಡಕ್ಕಾಗಿ ಕೊಟ್ಟಿರುವ ನಿವೇಶನಗಳಲ್ಲಿ ಹಳ್ಳ ತೆಗಿಯಕೂಡದು. ಕಟ್ಟಡಕ್ಕೋಸ್ಕರವಾಗಿ ಯಾ ನೆಲ ಮಟ್ಟವನ್ನು ಯಾತ್ರಸಾವದಕ್ಕಾಗಲಿ ಜಕಾಗುವ ಮಣ್ಣನ್ನು ಸ್ಯಾನಿಟರಿ ಇಂಜನಿಯರವರ ಅಪ್ಪಣೆ ಪ್ರಕಾರ ತೋರಿಸಲ್ಪಡುವ ಜಾಗಾದಲ್ಲಿ ತೆಗದುಕೊಳ್ಳತಕ್ಕದ್ದು.

10. ಮೇಲ್ಕಂಡ ಷರತ್ತುಗಳ ಪೈಕಿ ಯಾವದಕ್ಕಾದರು ತಪ್ಪು ನಡದಲ್ಲಿ ಕೊಡಲ್ಪಟ್ಟರುವ ನಿವೇಶನವನ್ನ ಹಿಡುವಳೀದಾರನು ಮತ್ಯಾವ ವಿಚಾರಣೆಯೂ ಇಲ್ಲದ ಹೋಗಲಾಡಿಸಿಕೊಳ್ಳುವದಕ್ಕೆ ಗುರಿಯಾಗುವನು.

11. ಮೇಲ್ಕಂಡ ಷರತ್ತುಗಳ ಪೈಕಿ ಯಾವದಕ್ಕಾದರೂ ತಪ್ಪು ನಡದಪ್ಪಕ್ಕೋಸ್ಕರ ನಿವೇಶನವನ್ನ ಸರ್ಕಾರಕ್ಕೆ ಕೀರಿಸಿಕೊಂಡ ಬಳಿಕ ಹಿಡುವಳೀದಾರನಾಗಲಿ ಅಥವಾ ಅವನಿಂದ ಪಡದುಕೊಂಡವರಾಗಲಿ ಯಾವ ವಿಧವಾದ ಪರಿಹಾರ ದ್ರವ್ಯಕ್ಕೆ ಇಪ್ಪೂ ಸದರಿ ನಿವೇಶನದ ಮೇಲೆ ಖರ್ಚು ಮಾಡಿರುವ ಲಾಗವಡಿಗೂ ಹಕ್ಕುದಾರರಾಗುವದಿಲ್ಲ.

ಎಂ. ಜಿ. ಕೃಷ್ಣಸ್ವಾಮಿರಾವ್,
ವೈಸ್ ಪ್ರೆಸಿಡೆಂಟ್.

ಮೈಸೂರು ಸಿಟಿ ಮ್ಯುನಿಸಿಪಾಲಿಟಿ.

ಇಸ್ತಹಾರ್ ತಾರೀಖು 29ನೆ ಮಾರ್ಚ್ 1907.

ಸ್ರ 1907ನೆ ಇಸವಿ ಜುಲೈ ಮಾಹೆ ತಾರೀಖು 1ರ ಲಾಗಾಯಿತು 1908ನೆ ಇಸವಿ ಜೂನ್ ಮಾಹೆ ತಾರೀಖು 30ರ ವರಿಗೆ ಈ ಕೆಳಗಿನ ಎ. ಷೆಡ್ಯೂಲಿನಲ್ಲಿ ನಮೂದಿಸುವ ಮೈಸೂರು ಸಿಟಿಗೆ ಸೇರಿದ ತಮಾಂ ಟೋಲ್ ಗೇಟುಗಳ ಮುಖಾಂತ್ರ ಸಿಟಿ ವಳಕ್ಕೆ ಬರುವ ಗಾಡಿಗಳು, ಜಾನವಾರುಗಳು, ವಗ್ಗೈರೆಗಳ ಮೇಲೆ ಬಿ. ಷೆಡ್ಯೂಲಿನಲ್ಲಿ ನಮೂದಾಗುವ ದರದಂತೆ ಸಿಟಿ ಮ್ಯುನಿಸಿಪಲ್ ರೆಗ್ಯುಲೇರ್ಷ 78 ಮತ್ತು 79ನೆ ಸೆಕ್ಷ್ಷನ್‌ಗಳಲ್ಲಿ ನಮೂದಿಸುವ ಷರತ್ತುಗಳಿಗೆ ವಳಪಡಿಸಿ ಪ್ರತಿ ಬಂದು ಟೋಲ್ ಗೇಟನಲ್ಲಿಯಾಗಲೀ ಅಥವಾ ದರೋಬಸ್ತ ಗೇಟುಗಳಲ್ಲಿಯಾಗಲಿ ಟೋಲು ವಸೂಲ್ಮಾಡುವ ಬಾಬನ್ನು 1907ನೆ ಇಸವಿ ಮೇ ತಾರೀಖು 20ನೆ ಮಧ್ಯಾಹ್ನ 1 ಘೆಂಟೆ ಲಾಗಾಯಿತು ರಂಗಾಚಾರ್ಲು ಯವರ ಮೆಮೋರಿಯಲ್ ಹಾಲಿನಲ್ಲಿ ಪ್ರಸಿಡೆಂಟರವರಿಂದ ಯಾ ಅವರಿಂದ ಸ್ಪೆಷಲ್ಲಾಗಿ ನೇಮಿಸಲ್ಪಟ್ಟ ಇತರ ಆಫಿಸರವರಿಂದ ಬಹಿರಂಗವಾಗಿ ಹರಾಜು ಹಾಕಲ್ಪಡುತ್ತೆ.

2. ಹರಾಜಿನಲ್ಲಿ ಬಾಬನ್ನು ಪಡೆಯುವ ಕಂಟ್ರಾಕ್ಟರು ಬಿ. ಷೆಡ್ಯೂಲಿನಲ್ಲಿ ನಮೂದಾಗುವ ರೇಟಿನಂತೆಯೇ ಗೇಟುಗಳ ಮುಖಾಂತರ ಸಿಟಿ ವಳಕ್ಕೆ ಬರುವ ಗಾಡಿ ವಗ್ಗೈರೆಗಳ ಮೇಲೆ ಟೋಲ್ ವಸೂಲ್ಮಾಡಬೇಕು. ಹೆಚ್ಚು ರೇಟನ್ನು ವಸೂಲ್ಮಾಡ ಕೂಡದು. ಶಿವಾಯಿ ಪ್ರೆಸಿಡೆಂಟರವರಿಂದ ವಿಧಾಯಕ ಮಾಡಲ್ಪಡುವ ಫಾರಂನಲ್ಲಿ ಕ್ರಮವಾಗಿ ಸಾಲ್ ಮಾಹೆ ತಾರೀಖು ನಿತ್ಯ ಟೋಲು ಪಾವತಿ ಮಾಡತಕ್ಕ ಆಸಾಮಿಗಳಿಗೆ ರಕೀದಿ ಕೊಡಬೇಕು.

3. ಎಲ್ಲಾ ದರಕ್ಕಿಂತ ಜಾಸ್ತಿ ದರವನ್ನೇ ಆಗಲಿ ಅಥವಾ ಮತ್ಯಾವ ದರವನ್ನೇ ಆಗಲೀ ಮಂಜೂರು ಮಾಡುವ ಅಧಿಕಾರವು ಪ್ರಸಿಡೆಂಟರವರಲ್ಲಿ ಇರುತ್ತದೆ.

4. ಪ್ರತಿ ತಿಂಗಳು 10ನೆ ತಾರೀಖು ವಳಗಾಗಿ ಹಿಂದಣ ಮಾಹೆಯ ಖಿಸ್ತು ಪಾವತಿ ಮಾಡಬೇಕು. ಹರಾಜು ಖೈದಾದ ಕೂಡ್ಲೆ ಬಾಬನ್ನು ಪಡೆಯತಕ್ಕ ಕಂಟ್ರಾಕ್ಟರು ಎರಡು ಮಾಹೆಗಳ ಖಿಸ್ತಿಗೆ ಸವುವಾದ ಮೊಬಲಗನ್ನು ಡಿಪಾಜಿಟ್ ಬಗ್ಗೆ ಹಾಜರ್ಮಾಡಬೇಕು. ಷರತ್ತುಗಳ ಪ್ರಕಾರ ಕಂಟ್ರಾಕ್ಟು ನಡೆದರೆ ಡಿಪಾಜಿಟ್ ನಲ್ಲಿರುವ ಮೊಬಲಗನ್ನು ಆಖೈರು ಎರಡು ಮಾಹೆಗಳ ಖಿಸ್ತು ಬಗ್ಗೆ ಜಮೆಗೆ ತೆನೆದುಕೊಳ್ಳುತ್ತೆ.

5. ಹರಾಜು ಖೈದಾದಕೂಡ್ಲೆ ಡಿಪಾಜಿಟ್ ಬಗ್ಗೆ ಮೊಬಲಗನ್ನು ಹಾಜರ್ಮಾಡದೆ ಇದ್ದರೆ ಖರ್ಚಿಗೂ ಮತ್ತು ಲುಕ್ಸಾನಿಗೂ ಅವಲ್ ಕ್ಷಂಟ್ರಾಕ್ಟುದಾರನನ್ನು ಗುರಿಪಡಿಸಿ ಪುನಹ ಹರಾಜು ಮಾಡಿಸುತ್ತೆ. ಖಿಸ್ತು ಮೊಬಲಗು ವಾಯಿದೆ ವಳಗೆ ಹಾಜರ್ಮಾಡಲು ತಪ್ಪಿದರೆ ಡಿಪಾಜಿಟ್ ಮೊಬಲಗನ್ನು ದಂಡವಾಗಿ ತೆಗದುಕ್ಕೊಂಡು ಬಾಬನ್ನು ದುಸರಾ ಹರಾಜು ಮಾಡಿಸಿ ಆದರಲ್ಲಿ ನಷ್ಟವೇನಾದರೂ ಆದಲ್ಲಿ ಆ ನಷ್ಟಕ್ಕೆ ಅವಲ ದರಖಾಸ್ತುದಾರನನ್ನು ಗುರಿಪಡಿಸುತ್ತೆ. ಎರಡನೆ ಹರಾಜಿನಲ್ಲಿ ನಫೆ ಖಂದಲ್ಲಿ ಮೊದಲು ದರಖಾಸ್ತುದಾರನಿಗೆ ಸದರಿ ನಫೆಗೆ ಹಕ್ಕು ಇರುವದಿಲ್ಲ.

6. ಪ್ರತಿ ಒಬ್ಬ ಕಂಟ್ರಾಕ್ಟರು ರೋಜೀನಾ ಟೋಲು ಗೇಟುಗಳ ಮುಖಾಂತ್ರ ಪ್ರವೇಶಮಾಡುವ ತರಹಾವಾರಿ ಗಾಡಿಯಾ ಜಾನವಾರುಗಳು ಇವುಗಳ ಮೇಲೆ ವಸೂಲಾದ ಟೋಲ್ ಯಾನೆ ಸುಂಕ ಇವುಗಳ ತಪ್ಸೀಲು ತೋರಿಸುವ ಲೆಕ್ಕವನ್ನು ಪ್ರಸಿಡೆಂಟರವರು ವಿಧಾಯಕ ಮಾಡುವ ನಮೂನೆಯಲ್ಲಿಟ್ಟು ಅಂಥಾ ಲೆಕ್ಕವನ್ನು ಕಂಟ್ರಾಕ್ಟರು ಪ್ರತಿ ಮಾಹೆಯಲ್ಲಿಯೂ ಪ್ರೆಸಿಡೆಂಟರವರ ಇನ್‌ಸ್ಪೆಕ್ಷ್ಷ ಬಗ್ಗೆ ಹಾಜರ್ಮಾಡಬೇಕು. ಶಿವಾಯಿ ಸಾಯರು ಅಥವಾ ಮ್ಯುನಿಸಿಪಲ್ ಉದ್ಯೋಗಸ್ಥರು ಅಪೇಕ್ಷಿಸಿದಾಗ ಅಂಥಾ ಲೆಕ್ಕಗಳನ್ನು ಅವರ ಇನ್‌ಸ್ಪೆಕ್ಷ್ಷ ಬಗ್ಗೆ ಹಾಜರ್ಮಾಡುವದಕ್ಕು ಬದ್ಧನಾಗಿರತಕ್ಕದ್ದು.

7. ಪ್ರತಿ ಒಬ್ಬ ಕಂಟ್ರಾಕ್ಟರು ಟೋಲು ಗೇಟುಗಳ ಮುಖಾಂತರ ಬರತಕ್ಕ ಗಾಡಿ ಯಾ ಜಾನುವಾರುಗಳ ತಪ್ಸೀಲು ಲೆಕ್ಕವನ್ನು 6ನೆ ಕಲಂನಲ್ಲಿ ನಮೂದಿಸಿರುವಂತೆ, ಇಷತಕ್ಕ ಬಗ್ಗೆ ಆಯಾಯು ಕಂಟ್ರಾಕ್ಟುದಾರನ ಸ್ವಂತ ಖರ್ಚಿನಿಂದ ಪ್ರತಿ ಬಂದು ಟೋಲು ಗೇಟಿನಲ್ಲಿಯೂ, ಒಟ್ಟೊಬ್ಬ ಮುತ್ಸದ್ದಿಯನ್ನು ಇಡುವದಕ್ಕೆ ಬದ್ಧನಾಗಿರತಕ್ಕದ್ದು.

8. ಹಾಲಿ ಇರುವ ಟೋಲು ಗೇಟುಗಳನ್ನು ಮತ್ತು ಮನೆಗಳನ್ನು ಕಂಟ್ರಾಕ್ಟರು ಬಳ್ಳೀ ಸ್ಥಿತಿಯಲ್ಲಿಟ್ಟುಕೊಂಡು ಅವುಗಳನ್ನು ಉಪಯೋಗಮಾಡಿಕೊಳ್ಳಬಹುದು.

9. ಈ ಮೇಲ್ಕಂಡ ಷರತ್ತುಗಳಿಗೆ ವಳಪಟ್ಟು ಕಂಟ್ರಾಕ್ಟು ಬಾಬನ್ನು ಸಲೀಸು ನಡಿಸಿಕ್ಕೊಂಡು ಹೋಗತಕ್ಕ ವಿಚಾರದಲ್ಲಿ ಕಂಟ್ರಾಕ್ಟರು ಪ್ರೆಸಿಡೆಂಟರವರಿಂದ ವಿಧಾಯಕವಾದ ನಮೂನೆಯಲ್ಲಿ ಛಾಪಾಕಾಗದದಲ್ಲಿ ರೂಲ್ಸು ಪ್ರಕಾರ ಮುಚ್ಚಳಿಕೆ ಬರೆದುಕೊಡಬೇಕು.

10. ಈ ಕೆಳಗೆ ನಮೂದಾಗುವುಗಳ ಮೇಲೆ ಕಂಟ್ರಾಕ್ಟರು ಟೋಲನ್ನು ವಸೂಲ್ಮಾಡಕೂಡದು :—